ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 740

2. ಸದಸ್ಯರ ಹೆಸರು : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು)

3. ಉತ್ತರಿಸಬೇಕಾದ ದಿನಾಂಕ : 26.12.2022

4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ ಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಅನುಕಂಪದ ಆಧಾರದ ಮೇಲೆ ನೇಮಕಾತಿ ಹೊಂದುವವರು ನೇಮಕಾತಿಗಾಗಿ ಅರ್ಜಿಯೊಂದಿಗೆ ಸರಿಯಾದ ಎಲ್ಲಾ ದಾಖಲೆಗಳನ್ನು ಒದಗಿಸಲಾಗಿದ್ದರೂ ಅರ್ಜಿದಾರರ ತಂದೆಯ ಹೆಸರಿನಲ್ಲಿ ನ್ಯೂನತೆ ಇದ್ದಲ್ಲಿ ಕೆ.ಸಿ.ಎಸ್.ಆರ್. ನಿಯಮಗಳಂತೆ ಯಾವ ದಾಖಲೆಗಳನ್ನು ಮತ್ತು ಯಾರಿಂದ ಪಡೆದು ಸಲ್ಲಿಸಬೇಕಾಗಿರುತ್ತದೆ ಎಂಬುದರ ಬಗ್ಗೆ ವಿವರ ನೀಡುವುದು. | ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು 1996 ರನ್ವಯ ರಾಜ್ಯ ಸರ್ಕಾರಿ ನೌಕರರು ಸೇವೆಯಲ್ಲಿರುವಾಗಲೇ ಮೃತಪಟ್ಟಲ್ಲಿ ಅವರ ಅವಲಂಬಿತರಲ್ಲಿ ಒಬ್ಬರಿಗೆ ಅರ್ಹತೆಯ ಆಧಾರದ ಮೇಲೆ ಅನುಕಂಪದ ಆಧಾರದ ನೇಮಕಾತಿಯನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ. ಅನುಕಂಪದ ಆಧಾರದ ನೇಮಕಾತಿಗಾಗಿ ಸಲ್ಲಿಸಿದ ಅರ್ಜಿಯಲ್ಲಿ ಅರ್ಜಿದಾರರ ತಂದೆಯ ಹೆಸರಿನಲ್ಲಿ ನ್ಯೂನತೆ ಇದ್ದಲ್ಲಿ ಯಾವ ದಾಖಲೆಗಳನ್ನು ಯಾರಿಂದ ಪಡೆದು ಸಲ್ಲಿಸಬೇಕೆಂಬುದರ ಬಗ್ಗೆ ಮೇಲ್ಕಂಡ ನಿಯಮಗಳಲ್ಲಿ ನಿರ್ದಿಷ್ಟಪಡಿಸಲಾಗಿರುವುದಿಲ್ಲ. ಆದಾಗ್ಯೂ, ಅನುಕಂಪದ ನೇಮಕಾತಿಯನ್ನು ಮಾಡಿಕೊಳ್ಳುವಾಗ ತಂದೆಯ ಹೆಸರಿನಲ್ಲಿ ನ್ಯೂನತೆಗಳು ಇದ್ದಲ್ಲಿ ಯಾವ ದಾಖಲೆಗಳನ್ನು ಪಡೆಯಬೇಕೆಂಬುದರ ಬಗ್ಗೆ ನೇಮಕಾತಿ ಪ್ರಾಧಿಕಾರಗಳು ಪರಿಶೀಲಿಸಿ ಸೂಕ್ತ ನಿರ್ಧಾರ ಕೈಗೊಳ್ಳಬಹುದಾಗಿರುತ್ತದೆ. |

ಸಂಖ್ಯೆ: ಸಿಆಸುಇ 54 ಸೇಅನೇ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ.



Generated from eOffice by G JAGADEESHA, CMO-JS(GJ), JOINT SECREATRY, CMO on 20/12/2022 06.52 PM